# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 677 (772) |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 20. 12.2021 |
| ಉತ್ತರಿಸಬೇಕಾದವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕೇತರರಿಗೆ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಶೇಕಡ 5% ರಷ್ಟು ಹುದ್ದೆಗಳನ್ನು ನಿಗಧಿಪಡಿಸಲಾಗಿದೆಯೇ; | ಹೌದು,<br><br>ಕಾಲೇಜು ಶಿಕ್ಷಣ ಇಲಾಖೆಯ ಕಛೇರಿ / ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರರಿಗೆ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಶೇಕಡ 5% ರಷ್ಟು ಹುದ್ದೆಗಳನ್ನು ನಿಗಧಿಪಡಿಸಲಾಗಿದೆ. |
| (ಆ) | ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆ ಹೊಂದಿರುವ, ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡುವಲ್ಲಿ ಇರುವ ತೊಂದರೆಗಳೇನು; | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ: 25.09.2009 ರಲ್ಲಿ ಜಾರಿಗೊಳಿಸಿರುವ ಕಾಲೇಜು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ.<br><br>ಯು.ಜಿ.ಸಿ. ಶೈಕ್ಷಣಿಕ ಅರ್ಹತೆ ಹೊಂದಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡುವ ಕುರಿತು ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ಪ್ರಾಧ್ಯಾಪಕರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಕುರಿತು ಈ ಹಿಂದೆ ದಿನಾಂಕ: 02.08.2014 ರಂದು ಅಂದಿನ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಆರ್ಥಿಕ ಇಲಾಖೆ, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಇಲಾಖೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧಿಕಾರಿಗಳು ಪಿ.ಹೆಚ್.ಡಿ/ ಎಸ್.ಎಲ್.ಇ.ಟಿ./ ಎನ್.ಇ.ಟಿ./ ಎಂ.ಫಿಲ್ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡಲು |
| (ಇ) | ಪದವಿ ಕಾಲೇಜಿನ ಬೋಧಕೇತರಿಗೆ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ನಿಗಧಿಪಡಿಸಿರುವ ಶೇಕಡ 5%ನ್ನು ರದ್ದುಪಡಿಸಿ, ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆ ಹೊಂದಿ, ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಶೇಕಡ 5% ರಷ್ಟು ಹುದ್ದೆಗಳನ್ನು ನಿಗಧಿಪಡಿಸಲು ಸರ್ಕಾರ ಚಿಂತಿಸುವುದೇ; | |
| (ಈ) | ಹಾಗಾದಲ್ಲಿ, ಯಾವ ಕಾಲಮಿತಿಯಲ್ಲಿ ತಿದ್ದುಪಡಿ ತರಲಾಗುವುದು? | |

| | | |
|---|---|---|
| | | ಅವಕಾಶವಿಲ್ಲ ಎಂದು ಅಭಿಪ್ರಾಯ ನೀಡಿರುತ್ತಾರೆ.<br><br>ಮುಂದುವರೆದು, ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಆಯ್ಕೆ ಹೊಂದಿ ರಾಜ್ಯ ವೇತನ ಶ್ರೇಣಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರು ಪಡೆಯುತ್ತಿರುವ ವೇತನ ಶ್ರೇಣಿ, ಅರ್ಹತೆಗಳಿಗಿಂತ ಭಿನ್ನವಾಗಿರುತ್ತದೆ. ಯು.ಜಿ.ಸಿ. ನಿಯಮಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಮಾತ್ರ ಅವಕಾಶ ಕಲ್ಪಿಸಲಾಗಿದ್ದು, ಪದವಿ ಪೂರ್ವ ಕಾಲೇಜಿನ ಅರ್ಹ ಉಪನ್ಯಾಸಕರುಗಳನ್ನು ಪದವಿ ಕಾಲೇಜಿಗೆ ನೇರವಾಗಿ ಬಡ್ತಿ ನೀಡಲು ಯು.ಜಿ.ಸಿ. ನಿಯಮಗಳಲ್ಲಿ ಅವಕಾಶ ಇರುವುದಿಲ್ಲ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ನೇಮಕಾತಿ ನಿಯಮಗಳಿಗೂ ಪದವಿ ಕಾಲೇಜುಗಳ ನೇಮಕಾತಿ ನಿಯಮಗಳಿಗೂ ವ್ಯತ್ಯಾಸ ಇರುವುದರಿಂದ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡಲು ಬರುವುದಿಲ್ಲ.<br><br>ಆದ್ದರಿಂದ ಯು.ಜಿ.ಸಿ. ಅರ್ಹತೆ ಪಡೆದಿರುವ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಉನ್ನತ ಶಿಕ್ಷಣ ಇಲಾಖೆಯ ಪದವಿ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

ಇಡಿ 235 ಡಿಸಿಇ 2021

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು